## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 382 |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 16-02-2023 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಗಳಲ್ಲಿ ವೈನ್ ಶಾಪ್, ಬಾರ್ ಅಂಡ್ ರೆಸ್ಟೋರೆಂಟ್, ಎಂ.ಎಸ್.ಐ.ಎಲ್ ಔಟ್ ಲೆಟ್ ಹಾಗೂ ಇತರೆ ಮದ್ಯ ಮಾರಾಟ ವಹಿವಾಟಿನ ವ್ಯಾಪಾರ ಮಳಿಗೆಗಳನ್ನು ಹೊಸದಾಗಿ ತೆರೆಯಲು ನಿಗಧಿಪಡಿಸಿರುವ ಮಾನದಂಡ, ನಿಯಮ ಹಾಗೂ ಷರತ್ತುಗಳೇನು; (ಆದೇಶಗಳ ಪ್ರತಿ ಒದಗಿಸುವುದು) | 1992ನೇ ಸಾಲಿನಿಂದ ಹೊಸದಾಗಿ ಸಿಎಲ್-2 ಹಾಗೂ ಸಿಎಲ್-9 (ಬಾರ್ & ರೆಸ್ಟೋರೆಂಟ್) ಸನ್ನದನ್ನು ನೀಡಲು ಸರ್ಕಾರ ನಿರ್ಬಂಧಿಸಿರುವುದರಿಂದ ಯಾವುದೇ ಹೊಸ ಸಿಎಲ್-2 ಮತ್ತು ಸಿಎಲ್-9 ಸನ್ನದುಗಳನ್ನು ಮಂಜೂರು ಮಾಡಲಾಗುತ್ತಿಲ್ಲ.<br><br>ಸಿಎಲ್-4, ಸಿಎಲ್-6ಎ, ಸಿಎಲ್-8, ಸಿಎಲ್-7ಎ, ಸಿಎಲ್-11ಸಿ, ಫಾರ್ಮ್ ಸಿಎಲ್-16, ಫಾರ್ಮ್ ಸಿಎಲ್-17 ಮತ್ತು ಫಾರ್ಮ್ ಸಿಎಲ್-18 ಸನ್ನದುಗಳನ್ನು ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯಗಳ ಮಾರಾಟ) ನಿಯಮಗಳು, 1968ರ ನಿಯಮ-3(11-ಸಿ), 8, 8(ಎ) ರಲ್ಲಿ ನಿಗಧಿಪಡಿಸಿರುವ ಸನ್ನದು ಶುಲ್ಕ ಮತ್ತು ಹೆಚ್ಚುವರಿ ಸನ್ನದು ಶುಲ್ಕ ಹಾಗೂ ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ-5 ರನ್ವಯ ಉದ್ದೇಶಿತ ಸನ್ನದಿನ 100 ಮೀಟರ್ ಅಂತರದೊಳಗೆ ಯಾವುದೇ ಶೈಕ್ಷಣಿಕ ಸಂಸ್ಥೆಗಳು, ಧಾರ್ಮಿಕ ಸಂಸ್ಥೆಗಳು, ಆಸ್ಪತ್ರೆಗಳು |



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 14/02/2023 04:55 PM

| | | |
|---|---|---|
| | | (30 ಬೆಡ್‌ಗಳನ್ನು ಹೊಂದಿರುವ ಆಸ್ಪತ್ರೆಗಳು) ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಗಳ ಕಾಲೋನಿಗಳು ಇರುವಂತಿಲ್ಲ. ಸ್ಥಳೀಯ ಸಂಸ್ಥೆಗಳು, ಹಾಗೂ ಪತ್ರಾಂಕಿತ ಅಧಿಕಾರಿಗಳ ಕೇಂದ್ರ/ರಾಜ್ಯ ಸರ್ಕಾರಿ ಕಛೇರಿಗಳು ಇರುವಂತಿಲ್ಲ. ಹಾಗೂ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲು ಸಂಖ್ಯೆ:12164-12166/2016ರ ದಿನಾಂಕ:31-03-2017ರಲ್ಲಿ ಆದೇಶಿಸಿದಂತೆ 20,000ಕ್ಕಿಂತ ಹೆಚ್ಚಿನ ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ 500 ಮೀಟರ್ (ಸರ್ವೀಸ್ ರಸ್ತೆಯು ಹಾದು ಹೋಗಿದ್ದಲ್ಲಿ ಸರ್ವೀಸ್ ರಸ್ತೆಯ ಅಂಚಿನಿಂದ ಅಥವಾ ರಾಜ್ಯ/ರಾಷ್ಟ್ರೀಯ ಹೆದ್ದಾರಿಯ ಅಂಚಿನಿಂದ) ಯಾವುದೇ ಸನ್ನದನ್ನು ಮಂಜೂರು ಮಾಡುವಂತಿಲ್ಲ. 20,000ಕ್ಕಿಂತ ಕಡಿಮೆ ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ 220 ಮೀಟರ್ (ಸರ್ವೀಸ್ ರಸ್ತೆಯು ಹಾದು ಹೋಗಿದ್ದಲ್ಲಿ ಸರ್ವೀಸ್ ರಸ್ತೆಯ ಅಂಚಿನಿಂದ ಅಥವಾ ರಾಜ್ಯ/ರಾಷ್ಟ್ರೀಯ ಹೆದ್ದಾರಿಯ ಅಂಚಿನಿಂದ) ಯಾವುದೇ ಸನ್ನದನ್ನು ಮಂಜೂರು ಮಾಡುವಂತಿಲ್ಲ.<br><br>ಮಾನ್ಯ ಸರ್ವೋಚ್ಚ ನ್ಯಾಯಾಲಯದ ಎಸ್.ಎಲ್.ಪಿ (ಸಿವಿಲ್) ಸಂಖ್ಯೆ:10243/2017ರಲ್ಲಿನ ದಿನಾಂಕ:11.07.2017ರ ಆದೇಶದಲ್ಲಿ ನೀಡಿದ ಸ್ಪಷ್ಟೀಕರಣದಂತೆ, ಮಹಾನಗರ ಪಾಲಿಕೆ, ನಗರ ಪಾಲಿಕೆ, ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ವ್ಯಾಪ್ತಿಗಳಲ್ಲಿ ಹಾದು ಹೋಗುವ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳ ಇಕ್ಕೆಲಗಳಲ್ಲಿರುವ ಸನ್ನದುಗಳನ್ನು ನಿಯಮಾನುಸಾರ ನವೀಕರಿಸಲು ಅವಕಾಶ |



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 14/02/2023 04:55 PM

| | | |
|---|---|---|
| | | ಕಲ್ಪಿಸಲಾಗಿರುತ್ತದೆ.<br><br>ಸರ್ಕಾರದ ಪತ್ರ ಸಂಖ್ಯೆ:ಆಇ 36 ಇಡಬ್ಲ್ಯೂಪಿ 2018, ದಿನಾಂಕ:06.08.2020ರಲ್ಲಿ 2011ರ ಜನಗಣತಿಯನ್ವಯ 5000 ಅಥವಾ ಅದಕ್ಕಿಂತ ಹೆಚ್ಚು ಜನಸಂಖ್ಯೆಯುಳ್ಳ ಗ್ರಾಮ ಪಂಚಾಯತಿ / ಸ್ಥಳೀಯ ಪ್ರದೇಶಗಳ ವ್ಯಾಪ್ತಿಯಲ್ಲಿ ಹಾದು ಹೋಗುವ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳ ಇಕ್ಕೆಲಗಳಲ್ಲಿ ಹೊಸದಾಗಿ ಸಿಎಲ್-6ಎ ಮತ್ತು ಸಿಎಲ್-7 ಸನ್ನದುಗಳಿಗೆ ಮಾತ್ರ ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ (5)ರಡಿಯಲ್ಲಿ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ವಿಧಿಸಿರುವ ನಿಬಂಧನೆಗಳನ್ನು ಹೊರತುಪಡಿಸಿ, ಇತರೆ ಷರತ್ತುಗಳನ್ನು ಪಾಲಿಸುವ ಷರತ್ತಿಗೊಳಪಟ್ಟು ನಿಯಮಾನುಸಾರ ಪ್ರಾರಂಭಿಸಲು ವಿನಾಯಿತಿಯನ್ನು ನೀಡಲಾಗಿದೆ.<br><br>ಮುಂದುವರೆದು, ಸರ್ಕಾರದ ಪತ್ರ ಸಂಖ್ಯೆ:ಆಇ 33 ಇಎಫ್ಎಲ್ 2021, ದಿನಾಂಕ:19.01.2022ರಲ್ಲಿ ಸರ್ಕಾರದ ರಾಜಸ್ವ ಹಿತದೃಷ್ಟಿಯಿಂದ ಮತ್ತು ಪ್ರವಾಸೋದ್ಯಮದ ಅಭಿವೃದ್ಧಿಗಾಗಿ ಹೊಸದಾಗಿ ಮಂಜೂರು ಮಾಡುವ ಸಿಎಲ್-7(ಎ) ಸನ್ನದುಗಳಿಗೂ ವಿಸ್ತರಿಸಿ ಅನುಮತಿಯನ್ನು ನೀಡಲಾಗಿದೆ. |
| ಆ) | ಗ್ರಾಮ ಪಂಚಾಯಿತಿಗಳ ವ್ಯಾಪ್ತಿಗಳಲ್ಲಿ ವೈನ್ ಶಾಪ್, ಬಾರ್ ಅಂಡ್ ರೆಸ್ಟೋರೆಂಟ್, ಎಂ.ಎಸ್.ಐ.ಎಲ್ ಔಟ್‌ಲೆಟ್ ಹಾಗೂ ಇತರೆ ಮದ್ಯ ಮಾರಾಟ ವಹಿವಾಟಿನ ವ್ಯಾಪಾರ ಮಳಿಗೆಗಳನ್ನು ಹೊಸದಾಗಿ ತೆರೆಯಲು ಸದರಿ ಗ್ರಾಮ | ಹೌದು, ಸರ್ಕಾರದ ಪತ್ರ ಸಂಖ್ಯೆ:ಆಇ 11 ಪಿಇಎಸ್ 2022, ದಿನಾಂಕ:13.01.2023 ರನ್ವಯ ಅಬಕಾರಿ ಸನ್ನದು ಮಂಜೂರಾತಿ/ಸ್ಥಳಾಂತರ ಮಾಡುವ ಸಂದರ್ಭದಲ್ಲಿ ಉದ್ದೇಶಿತ ಸ್ಥಳವು ಗ್ರಾಮ ಠಾಣಾ/ಗ್ರಾಮ ಪಂಚಾಯಿತಿ ಹಾಗೂ ನಗರ ಸ್ಥಳೀಯ ಪ್ರಾಧಿಕಾರ ವ್ಯಾಪ್ತಿಯಲ್ಲಿ ಬರುವ ಕಟ್ಟಡಗಳಿಗೆ ವಾಣಿಜ್ಯ ಉದ್ದೇಶಕ್ಕಾಗಿ ನಿಗದಿಪಡಿಸಿರುವ |



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 14/02/2023 04:55 PM

| | | |
|---|---|---|
| | ಪಂಚಾಯಿತಿಯಿಂದ ಅನುಮತಿ ಮತ್ತು ನಿರಾಕ್ಷೇಪಣಾ ಪ್ರಮಾಣ ಪತ್ರ ಪಡೆಯುವುದನ್ನು ಕಡ್ಡಾಯಗೊಳಿಸಲಾಗಿದೆಯೇ; | ಆಸ್ತಿ ತೆರಿಗೆಯನ್ನು ಪಾವತಿಸಿ, ಸಕ್ಷಮ ಪ್ರಾಧಿಕಾರಗಳು ನೀಡುವ ಉದ್ದಿಮೆ ಪರವಾನಿಗೆ ಅಥವಾ ನಿರಾಕ್ಷೇಪಣಾ ಪತ್ರವನ್ನು ಪಡೆದು ಸಲ್ಲಿಸಲು ಅರ್ಜಿದಾರರಿಗೆ ಕಡ್ಡಾಯಗೊಳಿಸಲಾಗಿದೆ. |
| ಇ) | ಗ್ರಾಮ ಪಂಚಾಯಿತಿಗಳು ತಮ್ಮ ವ್ಯಾಪ್ತಿಯಲ್ಲಿ ವ್ಯಾಪಾರ ವಹಿವಾಟು ನಿರ್ವಹಿಸುವ ಈ ಮದ್ಯ ಮಾರಾಟ ಮಳಿಗೆಗಳ ಮೇಲೆ ಯಾವ ರೀತಿಯ ನಿಯಂತ್ರಣಗಳನ್ನು ಹೊಂದಿವೆ? | ಗ್ರಾಮ ಪಂಚಾಯಿತಿಗಳು ತಮ್ಮ ವ್ಯಾಪ್ತಿಯಲ್ಲಿ ವ್ಯಾಪಾರ ವಹಿವಾಟು ನಿರ್ವಹಿಸುವ ಮದ್ಯ ಮಾರಾಟ ಮಳಿಗೆಗಳ ಮೇಲೆ ಅಬಕಾರಿ ಕಾಯ್ದೆ ಮತ್ತು ನಿಯಮಗಳಡಿಯಲ್ಲಿ ನಿಯಂತ್ರಿಸುವ ಅಧಿಕಾರ ವ್ಯಾಪ್ತಿಯನ್ನು ಹೊಂದಿರುವುದಿಲ್ಲ. |

ಆಇ 10 ಇಎಲ್‌ಕ್ಯೂ 2023

(ಕೆ. ಗೋಪಾಲಯ್ಯ)
ಅಬಕಾರಿ ಸಚಿವರು



Generated from eOffice by GOPALAIAH K, FD-EXCISE MIN(GK), EXCISE MINISTER, FINANCE DEPT.SEC on 14/02/2023 04:55 PM